**Akashvani : Bangalore**
**Regional Bulletin In Kannada**
**23.03.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**23.03.2026 / 18.40 hrs**

***************

ಮುಖ್ಯಾಂಶಗಳು

೧. ರಾಜ್ಯದ ಎಲ್ಲಾ ನ್ಯಾಯಬೆಲೆ ಅಂಗಡಿಗಳಿಗೆ ಸಿಸಿಟಿವಿ ಅಳವಡಿಸಲು ಸರ್ಕಾರ ನಿರ್ಧಾರ

೨. ವಿಧಾನಸೌಧದ ನೆಲಮಹಡಿಯ ಪಶ್ಚಿಮ ದ್ವಾರದ ಬಾಗಿಲು ನಾಳೆ ಉದ್ಘಾಟನೆ; ಸಚಿವರು, ಶಾಸಕರಿಗೆ ಸಭಾಧ್ಯಕ್ಷರಿಂದ ಆಹ್ವಾನ

೩. ವಿಧಾನಸಭಾ ಉಪಚುನಾವಣೆ; ಹಿರಿಯ ನಾಯಕರ ಉಪಸ್ಥಿತಿಯಲ್ಲಿ ಕಾಂಗ್ರೆಸ್, ಬಿಜೆಪಿ ಅಭ್ಯರ್ಥಿಗಳಿಂದ ಉಮೇದುವಾರಿಕೆ

೪. ಮೂಡಬಿದಿರೆ ಪೊಲೀಸ್ ಇನ್ಸ್‌ಪೆಕ್ಟರ್ ದೌರ್ಜನ್ಯ ಪ್ರಕರಣ; ಸಿಐಡಿ ತನಿಖೆಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಆದೇಶ

೫. ಬನ್ನೇರುಘಟ್ಟದ ನವಜಾತ ಆನೆಮರಿಗೆ ಪಶುವೈದ್ಯೆ ಸಮೀಕ್ಷಾ ರೆಡ್ಡಿ ಹೆಸರಿಡಲು ಸರ್ಕಾರ ತೀರ್ಮಾನ

***************

ರಾಜ್ಯದ ಎಲ್ಲಾ ನ್ಯಾಯಬೆಲೆ ಅಂಗಡಿಗಳಿಗೆ ಸಿಸಿ ಟಿವಿ ಅಳವಡಿಕೆ ಮಾಡಲಾಗುವುದು ಎಂದು ಆಹಾರ ಸಚಿವ ಕೆ.ಹಚ್.ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ.

ಮೇಲ್ಮನೆಯ ಪ್ರಶ್ನೋತ್ತರ ಕಲಾಪದಲ್ಲಿ ಇಂದು ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟ ವಿಚಾರ ಪ್ರತಿಧ್ವನಿಸಿತು. ಕೆ.ಆರ್‌ಪೇಟೆಯಲ್ಲಿ ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟದ ಬಗ್ಗೆ ಜೆಡಿಎಸ್ ಸದಸ್ಯ ಟಿ.ಎ.ಶರವಣ ಪ್ರಸ್ತಾಪಿಸಿ, ಸರ್ಕಾರದ ಗಮನ ಸೆಳೆದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು. ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟ ನಡೆಯದಂತೆ ಎಚ್ಚರ ವಹಿಸಲಾಗುವುದು ಎಂದು ಸದನಕ್ಕೆ ಭರವಸೆ ನೀಡಿದರು.

ಪಡಿತರ ಸರಬರಾಜು ವಾಹನಗಳಿಗೆ ಜಿಪಿಎಸ್ ಆಧಾರಿತ ಟ್ರ್ಯಾಕಿಂಗ್ ವ್ಯವಸ್ಥೆ ಜೊತೆಗೆ ಕಾಳಸಂತೆಯಲ್ಲಿ ಮಾರಾಟ ತಡೆಯಲು, ಕಮಾಂಡ್ ಸೆಂಟರ್ ತೆರೆಯಾಗುವುದು ಎಂದು ಸ್ಪಷ್ಟಪಡಿಸಿದರು.

***************

ವಿಧಾನಸೌಧದ ಸೌಂದರ್ಯಕ್ಕೆ ತಕ್ಕಂತೆ ನೆಲಮಹಡಿಯ ಪಶ್ಚಿಮ ದ್ವಾರದಲ್ಲಿ ಅಳವಡಿಸಿರುವ ಕುಸರಿ ಕೆತ್ತನೆಯ ಬೀಟೆ ಮರದ ಬಾಗಿಲನ್ನು ನಾಳೆ ಉದ್ಘಾಟಿಸಲಾಗುವುದು ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ವಿಧಾನಸಭೆಯಲ್ಲಿಂದು ಪ್ರಕಟಿಸಿದ್ದಾರೆ.

ಬಾಗಿಲು ಉದ್ಘಾಟನಾ ಕಾರ್ಯಕ್ರಮದಲ್ಲಿ ಎಲ್ಲಾ ಸದಸ್ಯರೂ ಭಾಗವಹಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

ಈ ಬಾಗಿಲನ್ನು ಮೈಸೂರು ಅರಮನೆಯಲ್ಲಿನ ಬಾಗಿಲುಗಳ ಮಾದರಿಯಲ್ಲಿ ಕುಸರಿ ಕೆತ್ತನೆ, ದ್ವಾರದ ಮೇಲ್ಭಾಗದಲ್ಲಿ ರಾಜ್ಯ ಲಾಂಛನ ಗಂಡಭೇರುಂಡ ಮತ್ತು ಅಶೋಕ ಸ್ತಂಭ ಕಲಾಕೃತಿಗಳನ್ನು ಅಳವಡಿಸಲಾಗಿದೆ. ರಾಜ್ಯ ಅರಣ್ಯ ಕೈಗಾರಿಕಾ ನಿಗಮದ ವತಿಯಿಂದ ನಿರ್ಮಿಸಲಾಗಿರುವ ಬಾಗಿಲಿಗೆ ೮೪ ಲಕ್ಷ ರೂಪಾಯಿ ವೆಚ್ಚವಾಗಿದೆ.

***************

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಗೆ ಇಂದು ಹಲವು ಅಭ್ಯರ್ಥಿಗಳು ಉಮೇದುವಾರಿಕೆ ಸಲ್ಲಿಸಿದರು.

ಕಾಂಗ್ರೆಸ್ ಅಭ್ಯರ್ಥಿಯಾಗಿ ಸಮರ್ಥ್ ಮಲ್ಲಿಕಾರ್ಜುನ್ ನಾಮಪತ್ರ ಸಲ್ಲಿಸಿದ್ದಾರೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಸೇರಿದಂತೆ ಹಲವು ಸಚಿವರು, ಶಾಸಕರು ಉಪಸ್ಥಿತರಿದ್ದರು.

ಬಿಜೆಪಿ ಅಭ್ಯರ್ಥಿಯಾಗಿ ಶ್ರೀನಿವಾಸ ದಾಸ ಕರಿಯಪ್ಪ ಹಾಗೂ ಬಂಡಾಯ ಕಾಂಗ್ರೆಸ್ ಅಭ್ಯರ್ಥಿಯಾಗಿ ಸಾಧಿಕ್ ಫೈಲ್ವಾನ್ ನಾಮಪತ್ರ ಸಲ್ಲಿಸಿದ್ದಾರೆ.

***************

ಬಾಗಲಕೋಟೆ ವಿಧಾನಸಭೆ ಉಪಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮ್ಮುಖದಲ್ಲಿ ನಾಮಪತ್ರ ಸಲ್ಲಿಸಿದರು.

ನಾಮಪತ್ರ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಗೆಲುವು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬಿಜೆಪಿ ಅಭ್ಯರ್ಥಿ ಡಾ.ವೀರಣ್ಣ ಚರಂತಿಮಠ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ಉಮೇದುವಾರಿಕೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಸಂಸದ ಜಗದೀಶ ಶೆಟ್ಟರ್, ಸಂಸದ ಪಿ.ಸಿ.ಗದ್ದಿಗೌಡರ್, ಮಾಜಿ ಸಚಿವ ಬಿ.ಶ್ರೀರಾಮುಲು ಸೇರಿದಂತೆ ಅನೇಕ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು.

***************

ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದಿರೆಯಲ್ಲಿ ಮಹಿಳೆಯರ ಮೇಲೆ ಪೊಲೀಸ್ ಇನ್ಸ್‌ಪೆಕ್ಟರ್ ದೌರ್ಜನ್ಯ ನಡೆಸಿದ್ದಾರೆ ಎಂಬ ಆರೋಪ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರೋಪಗಳ ಗಂಭೀರತೆಯನ್ನು ಪರಿಗಣಿಸಿ ಪ್ರಕರಣವನ್ನು ಸಿಐಡಿ ಗೆ ವರ್ಗಾಹಿಸುವಂತೆ ರಾಜ್ಯ ಪೊಲೀಸ್ ಮಹಾ ನಿರ್ದೇಶಕರಿಗೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ.

ಇದಕ್ಕೂ ಮೊದಲು ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ ಜೊತೆ ನಾಲ್ವರು ಸಂತ್ರಸ್ತರು ಗೃಹ ಸಚಿವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

***************

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬೇರಂಬಾಡಿ ಗ್ರಾಮದಲ್ಲಿ ಕಳೆದ ಹಲವು ದಿನಗಳಿಂದ ಕಾಣಿಸಿಕೊಂಡಿದ್ದ ಹುಲಿಯನ್ನು ಅರಣ್ಯ ಇಲಾಖೆ ಕಾರ್ಯಾಚರಣೆ ನಡೆಸಿ ಸೆರೆ ಹಿಡಿದಿದೆ.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮದ್ದೂರು ವನ್ಯಜೀವಿ ವಲಯದ ಸಿಬ್ಬಂದಿ ಸಾಕಾನೆ ಸಹಾಯದಿಂದ ಡ್ರೋಣ್ ಮೂಲಕ ಹುಲಿ ಚಲನವಲನದ ಮೇಲೆ ನಿಗಾ ಇಡಲಾಗಿತ್ತು. ಅರವಳಿಕೆ ಚುಚ್ಚುಮದ್ದು ನೀಡುವ ಮೂಲಕ ಅರಣ್ಯ ಅಧಿಕಾರಿಗಳು ಹುಲಿಯನ್ನು ಸೆರೆ ಹಿಡಿದಿದ್ದಾರೆ.

ಹುಲಿ ಸೆರೆ ಕಾರ್ಯಾಚರಣೆ ಯಶಸ್ವಿಯಾದ ಹಿನ್ನೆಲೆಯಲ್ಲಿ ರೈತರು ನಿಟ್ಟುಸಿರು ಬಿಟ್ಟಿದ್ದಾರೆ.

***************

ಕಳೆದ ವಾರ ಶಿವಮೊಗ್ಗ ಮೃಗಾಲಯದಲ್ಲಿ ನೀರಾನೆ ದಾಳಿಯಿಂದ ಸಾವನ್ನಪ್ಪಿದ್ದ ಪಶುವೈದ್ಯೆ ಸಮೀಕ್ಷಾ ರೆಡ್ಡಿ ಅವರ ಹೆಸರನ್ನು ನವಜಾತ ಆನೆಮರಿಗೆ ಇಡುವ ಮೂಲಕ ಗೌರವಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಶಿವಮೊಗ್ಗ ಮೃಗಾಲಯಕ್ಕೆ ಇಂದು ಭೇಟಿ ನೀಡಿದ ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಎನ್.ರಂಗಸ್ವಾಮಿ ಈ ಘೋಷಣೆ ಮಾಡಿದ್ದಾರೆ.

ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಇತ್ತೀಚಿಗೆ ಜನಿಸಿದ ಆನೆಮರಿಗೆ ಸಮೀಕ್ಷಾ ರೆಡ್ಡಿ ಹೆಸರನ್ನು ಇಡಲಾಗುವುದು ಎಂದು ತಿಳಿಸಿದ್ದಾರೆ.

ಘಟನೆ ಕುರಿತಂತೆ ಅರಣ್ಯ ಅಧಿಕಾರಿಗಳು ಹಾಗೂ ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

***************

ಮೈಸೂರು ಜಿಲ್ಲೆಯ ನಂಜನಗೂಡಿನ ಹೆಜ್ಜಿಗೆ ಗ್ರಾಮದ ಬಳಿ ನಡೆದ ೪೬ ಬೃಹತ್ ಮರಗಳ ಕಟಾವು ಖಂಡಿಸಿ, ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಇಂದು ಮೈಸೂರಿನ ಅರಣ್ಯ ಭವನದ ಮುಂದೆ ಬೃಹತ್ ಪ್ರತಿಭಟನೆ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ 'ಪರಿಸರಕ್ಕಾಗಿ ನಾವು' ಸಂಘಟನೆಯ ಪ್ರಧಾನ ಕಾರ್ಯದರ್ಶಿ ಪರಶುರಾಮೇಗೌಡ, ಮುಖ್ಯಮಂತ್ರಿಗಳ ತವರು ಜಿಲ್ಲೆ ಹಾಗೂ ಅವರೇ ಪ್ರತಿನಿಧಿಸುವ ವರುಣಾ ಕ್ಷೇತ್ರದ ವ್ಯಾಪ್ತಿಯಲ್ಲೇ ಇಂತಹ ಗಂಭೀರ ಘಟನೆ ನಡೆದಿರುವುದು ವಿಷಾದನೀಯ ಎಂದು ಹೇಳಿದರು.

ವಿಶೇಷ ತನಿಖಾ ತಂಡ ರಚಿಸಿ, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ನೀಡುವಂತೆ ಒತ್ತಾಯಿಸಿದರು.

***************

ರಾಜ್ಯ ವಿವಿಧೆಡೆ ಇಂದು ಆದ್ಯ ವಚನಕಾರ ದೇವರ ದಾಸಿಮಯ್ಯ ಅವರ ಜಯಂತಿ ಆಚರಿಸಲಾಯಿತು.

ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ  ಆಚರಣಾ ಸಮಿತಿ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ದೇವರ ದಾಸಿಮಯ್ಯ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

ದೇವರ ದಾಸಿಮಯ್ಯ ಮೂಢನಂಬಿಕೆ ಮತ್ತು ಮೌಢ್ಯತೆ, ತಾರತಮ್ಯ ಹೋಗಲಾಡಿಸುವ ನಿಟ್ಟಿನಲ್ಲಿ ವಚನಗಳ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಕೆಲಸ ಮಾಡಿದ್ದಾರೆ ಎಂದು ರಾಜ್ಯ ಕೈಮಗ್ಗ ಮತ್ತು ಅಭಿವೃದ್ಧಿ ನಿಗಮದ ಅಧ್ಯಕ್ಷ ನಾಗೇಂದ್ರ ಕುಮಾರ್ ಮಂಡ್ಯದಲ್ಲಿ ಹೇಳಿದ್ದಾರೆ.

ನೇಕಾರ ಸಮುದಾಯದ ಆರಾಧ್ಯ ದೈವ ದೇವರ ದಾಸಿಮಯ್ಯ ಅವರು ಸರಳ ಭಾಷೆಯಲ್ಲಿ ಸರ್ವರೂ ಅರಿಯುವಂತೆ ವಚನಗಳನ್ನು ರಚಿಸುವ ಮೂಲಕ ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಅವಿರತ ಶ್ರಮವಹಿಸಿದ್ದರು ಎಂದು ಮಂಗಳೂರು ಕರಾವಳಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಂ.ಎ ಗಫೂರ್ ಉಡುಪಿಯಲ್ಲಿ ಹೇಳಿದ್ದಾರೆ.

ಜೀವನ ಎಂಬ ರಥದಲ್ಲಿ ಭಕ್ತಿ ಎಂಬ ಕೀಲಿ ಪ್ರತಿಯೊಬ್ಬರಿಗೂ ಅತೀ ಮುಖ್ಯ ಎಂದು ವಿಜಯಪುರ ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಹೇಳಿದ್ದಾರೆ.

ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರತಿಯೊಬ್ಬರೂ ಭಕ್ತಿ ಮಾರ್ಗ ಪಾಲಿಸಬೇಕು ಎಂದು ಕರೆ ನೀಡಿದ್ದಾರೆ.

ದೇವರ ದಾಸಿಮಯ್ಯನವರು ತಮ್ಮ ವಚನಗಳ ಮೂಲಕ ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದುವಲ್ಲಿ ಶ್ರಮಿಸಿದ್ದಾರೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅಭಿಪ್ರಾಯಪಟ್ಟಿದ್ದಾರೆ.

***************

ಕೊಡಗು ಜಿಲ್ಲೆಯಲ್ಲಿಯೂ ವಾಣಿಜ್ಯ ಬಳಕೆಯ ಅಡುಗೆ ಅನಿಲ ಸಿಲಿಂಡರ್ ಕೊರತೆ ಉಂಟಾಗಿದ್ದು, ಅನೇಕ ಹೋಟೆಲ್‌ಗಳು ಬಾಗಿಲು ಮುಚ್ಚಿವೆ.

ಕೆಲವು ರೆಸಾರ್ಟ್‌ಗಳು ಸೌದೆ ಒಲೆಯಲ್ಲಿ ಅಡುಗೆ ತಯಾರಿಸಲು ಮುಂದಾಗಿವೆ. ಮಡಿಕೇರಿ, ಕುಶಾಲನಗರ ಸೇರಿದಂತೆ ಹಲವೆಡೆ ಹೋಟೆಲ್‌ಗಳಲ್ಲಿ ಸೀಮಿತ ಖಾದ್ಯ ತಯಾರಿಸಲು ನಿರ್ಧರಿಸಲಾಗಿದೆ.

ಇನ್ನೆರಡು ದಿನಗಳಲ್ಲಿ ಗ್ಯಾಸ್ ಸಿಲಿಂಡರ್ ನಿಗದಿತ ಸಂಖ್ಯೆಯಲ್ಲಿ ಪೂರೈಕೆಯಾಗದೇ ಹೋದಲ್ಲಿ ಕೊಡಗು ಜಿಲ್ಲೆಯ ಶೇಕಡಾ ೩೦ ರಷ್ಟು ಹೋಟೇಲ್ ಗಳು ವ್ಯಾಪಾರ ಸ್ಥಗಿತಗೊಳಿಸುವ ಅನಿವಾರ್ಯತೆ ಇದೆ ಎಂದು ಕೊಡಗು ಹೋಟೇಲ್ ಅಸೋಸಿಯೇಷನ್ ಅಧ್ಯಕ್ಷ ದಿನೇಶ್ ಕಾರ್ಯಪ್ಪ ತಿಳಿಸಿದ್ದಾರೆ.

***************

ಸಂಕ್ಷಿಪ್ತ ಸುದ್ದಿಗಳು

೧. ಭಗವಾನ್ ರಾಮಾನುಜ ರಾಷ್ಟ್ರೀಯ ಸಂಶೋಧನಾ ಸಂಸ್ಥೆ ೬ ಲಕ್ಷ ತಾಳೆಗರಿಗಳನ್ನು ಸಂರಕ್ಷಿಸಿ ಡಿಜಿಟಲೀಕರಣ ಮಾಡಿ ಭಾರತ ದೇಶದ ಕೀರ್ತಿಯನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಹೆಚ್ಚಿಸಿ ಸಾರ್ಥಕತೆ ಮೆರೆಯುತ್ತಿದೆ ಎಂದು ನಾಡೋಜ ಪ್ರೊ.ಭಾಷ್ಯಂ ಸ್ವಾಮೀಜಿ ಮಂಡ್ಯದಲ್ಲಿ ತಿಳಿಸಿದ್ದಾರೆ.

೨. ಗೋಡಂಬಿ ಹಣ್ಣಿನ ಮೌಲ್ಯವರ್ಧನೆಯಿಂದ ವಿವಿಧ ಪಾನೀಯಗಳನ್ನು ತಯಾರಿಸಿ ಹೆಚ್ಚಿನ ಆದಾಯ ಪಡೆಯಬೇಕು ಎಂದು ಬೀದರ್ ತೋಟಗಾರಿಕೆ ಕಾಲೇಜಿನ ಡೀನ್ ಡಾ.ಎಸ್.ವಿ.ಪಾಟೀಲ್ ರೈತರಿಗೆ ಸಲಹೆ ನೀಡಿದ್ದಾರೆ.

೩. ಮಹಿಳಾ ನೌಕರರು ಕಚೇರಿ ಕೆಲಸ ಮತ್ತು ಮನೆಯ ಜವಾಬ್ದಾರಿಗಳೆರಡನ್ನೂ ಸಮರ್ಥವಾಗಿ ನಿಭಾಯಿಸುತ್ತಿದ್ದಾರೆ. ಕಚೇರಿಯ ಕೆಲಸದ ಒತ್ತಡದಲ್ಲಿ ತಮ್ಮ ಆರೋಗ್ಯದ ಕಡೆಗೆ ಗಮನಹರಿಸುತ್ತಿಲ್ಲ ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಅಭಿಪ್ರಾಯಪಟ್ಟಿದ್ದಾರೆ.

೪. ಬೆಳಗಾವಿಯ ನಾನಾವಾಡಿಯ ಕಮಾಂಡೋ ವಿಂಗ್ ಆವರಣದಲ್ಲಿನ ಈಜುಕೊಳದಲ್ಲಿ ಈಜುವಾಗ. ಹೃದಯಘಾತದಿಂದ ಲೆಫ್ಟಿನೆಂಟ್ ಅಮಿತ್ ಸಿಂಗ್ ಮೃತಪಟ್ಟಿದ್ದಾರೆ.

*******ಮುಕ್ತಾಯ*******